# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 122 (64) |
| ಸದಸ್ಯರ ಹೆಸರು | : | ಡಾ: ತಳವಾರ ಸಾಬಣ್ಣಾ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪ್ರತಿ ವರ್ಷ ಎಸ್‌ಎಸ್‌ಎಲ್‌ಸಿ / ಪಿಯುಸಿ ಪರೀಕ್ಷೆ ಫಲಿತಾಂಶ ಬಂದಾಗ ಯಾದಗಿರಿ ಜಿಲ್ಲೆ ಕೊನೆಯ ಸ್ಥಾನ ಪಡೆಯಲು ಕಾರಣಗಳೇನು;</td><td>ಪೋಷಕರ ವಲಸೆ ಹಾಗೂ ಇತರೆ ಸಾಮಾಜಿಕ ಕಾರಣಗಳಿಂದ ಜಿಲ್ಲೆಯು ಶೈಕ್ಷಣಿಕವಾಗಿ ಕೊನೆಯ ಸ್ಥಾನದಲ್ಲಿದೆ.</td></tr>
<tr><td>ಆ)</td><td>ಯಾದಗಿರಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆಗಿಂತ ಅರ್ಧದಷ್ಟು ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು:</td><td rowspan="3">ಯಾದಗಿರಿ ಜಿಲ್ಲೆಗೆ ಸಂಬಂಧಿಸಿದಂತೆ
<table>
<tr><th>ವಿವರ</th><th>ಮಂಜೂರಾದ ಹುದ್ದೆಗಳು</th><th>ಕಾರ್ಯನಿರತ ಹುದ್ದೆಗಳು</th><th>ಖಾಲಿ ಹುದ್ದೆಗಳು</th><th>ಅತಿಥಿ ಶಿಕ್ಷಕರ ಸಂಖ್ಯೆ</th></tr>
<tr><td>ಪ್ರಾಥಮಿಕ</td><td>5626</td><td>2992</td><td>2634</td><td>2259</td></tr>
<tr><td>ಪ್ರೌಢ</td><td>1435</td><td>753</td><td>682</td><td>558</td></tr>
</table>
ಸರ್ಕಾರಿ ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ<br>
ಈ ವರ್ಷದಲ್ಲಿ 614 ಜಿಪಿಟಿ ಶಿಕ್ಷಕರು ನೇಮಕಾತಿಗೆ ಅರ್ಹರಾಗಿದ್ದು, ಅದರಲ್ಲಿ 585 ನೇಮಕಾತಿಯ ಅಭ್ಯರ್ಥಿಗಳು ನೇಮಕಾತಿ ಆದೇಶ ಪಡೆದು ಕರ್ತವ್ಯ ನಿರ್ವಹಿಸುತ್ತಿದಾರೆ. ಉಳಿದ 29 ಅಭ್ಯರ್ಥಿಗಳು ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಅಂತಿಮ ಆದೇಶಕ್ಕಾಗಿ ಕಾಯ್ದಿರಿಸಲಾಗಿದೆ.<br>
ಸರ್ಕಾರಿ ಪ್ರೌಢ ಶಾಲೆಗೆ ಸಂಬಂಧಿಸಿದಂತೆ<br>
ಸರ್ಕಾರದ ಪತ್ರ ಸಂಖ್ಯೆ:ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಲಾಗಿತ್ತು.<br>
ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ</td></tr>
<tr><td>ಇ)</td><td>ಯಾದಗಿರಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳು/ಬೋಧನಾ ಕೊಠಡಿಗಳ ಕೊರತೆ, ಶೌಚಾಲಯ, ಬೋಧನಾ ಸಲಕರಣೆಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು:</td></tr>
<tr><td>ಈ)</td><td>ಶಿಕ್ಷಕರ ಕೊರತೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸದೆ ಗುಣಮಟ್ಟದ ಶಿಕ್ಷಣ ಹೇಗೆ ಸಾಧಿಸಲಾಗುವುದು ಜಿಲ್ಲೆಯು ಶೈಕ್ಷಣಿಕವಾಗಿ:</td></tr>
</table>

| | | |
|---|---|---|
| | ವಲಸೆಯು ಹಿಂದುಳಿಯಲು ಕಾರಣವಾಗಿರುವುದರಿಂದ ಈ ಬಗ್ಗೆ ಸರ್ಕಾರದ ಕೈಗೊಂಡ ಕ್ರಮಗಳೇನು? | ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.<br><br>ಯಾದಗಿರಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳು/ಬೋಧನಾ ಕೊಠಡಿಗಳ ಕೊರತೆ, ಶೌಚಾಲಯ, ಬೋಧನಾ ಸಲಕರಣೆಗಳ ಕೊರತೆಯನ್ನು ನೀಗಿಸಲು ಈ ಕೆಳಕಂಡಂತೆ ಕ್ರಮ ಕೈಗೊಂಡಿದೆ.<br><br>• 2022-23ನೇ ಸಾಲಿನಲ್ಲಿ ವಿವೇಕ ಯೋಜನೆಯಡಿಯಲ್ಲಿ 184 ಕೊಠಡಿಗಳಿಗೆ ರೂ.2583.00 ಲಕ್ಷ ಅನುದಾನ ಮಂಜೂರಾಗಿರುತ್ತದೆ. ಕಾಮಗಾರಿಗಳು ಪ್ರಗತಿ ಹಂತದಲ್ಲಿರುತ್ತದೆ.<br>• 2021-22 ನೇ ಸಾಲಿನಲ್ಲಿ 32 ಶೌಚಾಲಯಗಳ ನಿರ್ಮಾಣಕ್ಕೆ ರೂ.81.97 ಲಕ್ಷ ಮಂಜೂರಾಗಿದ್ದು, ಪೂರ್ಣ ಅನುದಾನ ಬಿಡುಗಡೆಯಾಗಿರುತ್ತದೆ. ಸದರಿ ಕಾಮಗಾರಿಗಳು ಮುಕ್ತಾಯಗೊಂಡಿರುತ್ತವೆ.<br>• 2022-23 ನೇ ಸಾಲಿನಲ್ಲಿ 158 ಶೌಚಾಲಯಗಳ ನಿರ್ಮಾಣಕ್ಕೆ ರೂ.511.00 ಲಕ್ಷ ನಿಗದಿಯಾಗಿ ರೂ.97.59 ಲಕ್ಷ ಬಿಡುಗಡೆಯಾಗಿರುತ್ತದೆ. ಕಾಮಗಾರಿಗಳು ಪ್ರಗತಿ ಹಂತದಲ್ಲಿರುತ್ತದೆ.<br>• 2023-24 ನೇ ಸಾಲಿನಲ್ಲಿ 156 ಶೌಚಾಲಯಗಳ ನಿರ್ಮಾಣಕ್ಕೆ ರೂ.385.84 ಲಕ್ಷ ಮಂಜೂರಾಗಿದ್ದು, ಪೂರ್ಣ ಅನುದಾನ ಬಿಡುಗಡೆಯಾಗಿರುತ್ತದೆ. ಕಾಮಗಾರಿಗಳು ಪ್ರಗತಿ ಹಂತದಲ್ಲಿರುತ್ತದೆ.<br>• 2021-22 ನೇ ಸಾಲಿಗೆ ಸುರಪುರ ತಾಲ್ಲೂಕಿನ 67 ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ದುರಸ್ಥಿಗಾಗಿ ರೂ.202.05 ಲಕ್ಷ ಅನುದಾನ ಮಂಜೂರಾಗಿರುತ್ತದೆ. ಸದರಿ ಕಾಮಗಾರಿಗಳು ಮುಕ್ತಾಯಗೊಂಡಿರುತ್ತವೆ.<br>• 2023 ನೇ ಸಾಲಿಗೆ 73 ಶಾಲೆಗಳ 262 ಕೊಠಡಿಗಳ ದುರಸ್ಥಿಗಾಗಿ ರೂ.281.10 ಲಕ್ಷ ನಿಗದಿಯಾಗಿದ್ದು, ಪೂರ್ಣ ಅನುದಾನ ಬಿಡುಗಡೆಯಾಗಿರುತ್ತದೆ. ಕಾಮಗಾರಿ ಅನುಷ್ಠಾನವು ಟೆಂಡರ್ ಹಂತದಲ್ಲಿದೆ.<br>• ಉಳಿದಂತೆ ಅನುದಾನ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ:ಇಪಿ 189 ಎಸ್ಎಲ್‌ಬಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.